ಕುಂಬ ಮೇಳ ಜಾಥಾಗೆ ಚಾಲನೇ ನೀಡಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ

ಚಿಕ್ಕೋಡಿ (ಮೇ.03): ಮೇ 07 ರಂದು ಜರುಗಲಿರುವ ಚುನಾವಣೆಯಲ್ಲಿ ಪ್ರತಿಯೊಬ್ಬರು ತಮ್ಮ ಮತದಾನದ ಹಕ್ಕನ್ನು ಕಡ್ಡಾಯವಾಗಿ ಚಲಾಯಿಸುವ ಮೂಲಕ ಸಧೃಡ ರಾಷ್ಟ್ರ ನಿರ್ಮಾಣ ಮಾಡಲು ಮುಂದಾಗಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ.ಸಿ.ಇ.ಓ ರಾಹುಲ ಶಿಂಧೆ ಅವರು ಕರೆ ನೀಡಿದರು.

ಚಿಕ್ಕೋಡಿ ತಾ.ಪಂ. ಕಚೇರಿ ಆವರಣದಲ್ಲಿ ಮತದಾನ ಜಾಗೃತಿಗಾಗಿ ಹಮ್ಮಿಕೊಳ್ಳಲಾಗಿದ್ದ ಕುಂಬ ಮೇಳ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು ಎಲ್ಲ ಮತದಾರರು ತಪ್ಪದೇ ಮತ ಚಲಾಯಿಸುವುದರಿಂದ ಪ್ರಜಾಪ್ರಭುತ್ವ ಗಟ್ಟಿಗೊಳ್ಳುತ್ತದೆ. ಮತದಾನದಿಂದ ಯಾರು ಕೂಡಾ ಹೊರಗುಳಿಯದೇ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದರು. ಒಬ್ಬ ಮಹಿಳೆ ಕನಿಷ್ಠ ಹತ್ತು ಜನರಿಗಾದ್ರೂ ಮತದಾನ ಮಾಡುವಂತೆ ಪ್ರೇರೆಪಸಿಬೇಕು ಎಂದು ಕುಂಬ ಮೇಳದಲ್ಲಿ ಪಾಲ್ಗೊಂಡ ಮಹಿಳೆಯರಿಗೆ ತಿಳಿಸಿದರು. ಕಡ್ಡಾಯವಾಗಿ ಮತದಾನ ಮಾಡುವದರ ಜೊತೆಗೆ ತಮ್ಮ ಅಕ್ಕ, ಪಕ್ಕದವರಿಗೂ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿ ಮತ ಚಲಾಯಿಸಲು ಪ್ರೇರೆಪಿಸಬೇಕು. ಎಂದರುಕುಂಬ ಮೇಳ ತಾಲೂಕು ಪಂಚಾಯತ ಆವರಣದಿಂದ ಪ್ರಾರಂಭಗೊಂಡು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಕೊನೆಗೆ ಬಸ್ ನಿಲ್ಧಾಣದ ಹತ್ತಿರ ಮುಕ್ತಾಯಗೊಳಿಸಲಾಯಿತು. ಈ ಸಂದರ್ಭದಲ್ಲಿ ಜಿ.ಪಂ ಮುಖ್ಯಯೋಜನಾಧಿಕಾರಿ ಗಂಗಾಧರ ದಿವಟರ, ಜಿ.ಪಂ ಲೆಕ್ಕಾಧಿಕಾರಿ ಗಂಗಾ ಹಿರೇಮಠ , ತಾಪಂ. ಸಹಾಯಕ ನಿರ್ದೇಶಕ ಶಿವಾನಂದ ಶಿರಗಾಂವ, ಪುರಸಭೇ ಮುಖ್ಯಾಧಿಕಾರಿ ಮಹಾಂತೇಶ ನಿಡವಣಿ, ತಾಪಂ. ಸಹಾಯಕ ನಿರ್ದೇಶಕ ಎಸ್ ಎಸ್ ಮಠದ ವ್ಯವಸ್ಥಾಪಕರಾದ ಉದಯಗೌಡ ಪಾಟೀಲ ಜಿಲ್ಲಾ ಪಂಚಾಯತ ಜಿಲ್ಲಾ ಐ.ಇ.ಸಿ ಸಂಯೋಜಕ ಪ್ರಮೋದ ಗೋಡೆಕರ , ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ತಾಪಂ. ಸಿಬ್ಬಂದಿಗಳು, ಆಶಾ ಕಾರ್ಯಕರ್ತರು, ಅಂಗನವಾಡಿಕಾರ್ಯಕರ್ತರು ಎನ.ಆರ್.ಎಲ್.ಎಮ್. ಯೋಜನೆಯ ಮಹಿಳಾ ಸ್ವಸಹಾಯ ಸಂಘದವರು ಉಪಸ್ಥಿತರಿದ್ದರು.

ಗ್ಯಾರಂಟಿ ಒಂದೇ ಅಲ್ಲ ಕಾಂಗ್ರೆಸ್ ಗೆಲುವಿಗೆ ಸಾಕಷ್ಟು ಕಾರಣಗಳಿವೆ : ಜ್ಯೋತಿ

ಕೊಪ್ಪಳ : ಇಲ್ಲಿನ ನಗರಸಭೆ 9 ನೇ ವಾರ್ಡು ಮತ್ತು ಭಾಗ್ಯನಗರದ ವಾರ್ಡ ನಂಬರ್ 2 ರಲ್ಲಿ ಪ್ರಚಾರ ನಡೆಸಿದ ಜಿಲ್ಲಾ ಕಾಂಗ್ರೆಸ್ ಮುಖಂಡೆ ಮತ್ತು ಗ್ಯಾರಂಟಿ ಪ್ರಾಧಿಕಾರದ ಸದಸ್ಯೆ ಜ್ಯೋತಿ ಎಂ. ಗೊಂಡಬಾಳ ಅವರು ಗ್ಯಾರಂಟಿ ಒಂದೇ ಅಲ್ಲ ಕಾಂಗ್ರೆಸ್ ಗೆಲುವಿಗೆ ಸಾಕಷ್ಟು ಶಕ್ತಿ ಇವೆ ಅಭಿಪ್ರಾಯ ಪಟ್ಟರು. ಕಾಂಗ್ರೆಸ್ ಅಭ್ಯರ್ಥಿ ಕೆ. ರಾಜಶೇಖರ್ ಹಿಟ್ನಾಳ ಅವರು ಎರಡು ಬಾರಿ ಜಿಲ್ಲಾ ಪಂಚಾಯತಿ ಅಧ್ಯಕ್ಷರಾಗಿ ಯಾವುದೇ ಲೋಪವಿಲ್ಲದ ಆಡಳಿತ ನೀಡಿದ ಅನುಭವವಿದೆ, ಜನರೊಂದಿಗೆ ಬೆರೆಯುವ ಮನಸ್ಸಿದೆ, ಅಣ್ಣ ಶಾಸಕರಾಗಿದ್ದಾರೆ, ಕುಟುಂಬಕ್ಕೆ ತೀರಾ ಆಪ್ತರಾಗಿರುವ ಸಿದ್ದರಾಮಯ್ಯ ಅವರಿದ್ದಾರೆ, ಆದ್ದರಿಂದ ಕೊಪ್ಪಳ ಲೋಕಸಭೆ ವ್ಯಾಪ್ತಿಯ ಎಂಟು ವಿಧಾನಸಭೆ ಕ್ಷೇತ್ರಗಳ್ಲಿ ಆರು ಜನ ಶಾಸಕರು ಕಾಂಗ್ರೆಸ್‌ನವರಾಗಿದ್ದು ಉಳಿದ ಎರಡು ಕಡೆಗೂ ಕಾಂಗ್ರೆಸ್ ಬಲವಿದೆ ಒಟ್ಟಾರೆಯಾಗಿ ಒಂದು ಲಕ್ಷಕ್ಕೂ ಅಧಿಕ ಮತಗಳ ಅಂತರದಲ್ಲಿ ಗೆಲ್ಲುವ ಎಲ್ಲಾ ಸಾಧ್ಯತೆಗಳಿವೆ ಎಂದು ಹೇಳಿದರು.ಗ್ಯಾರಂಟಿ ಒಂದೇ ಕಾಂಗ್ರೆಸ್ ಗೆಲುವಿಗೆ ಕಾರಣ ಎನ್ನುವ ರೀತಿಯಲ್ಲಿ ಜನರಲ್ಲಿ ತಪ್ಪು ಭಾವನೆ ಮೂಡುವಂತೆ ಮಾಡುತಿದ್ದಾರೆ, ಬಿಜೆಪಿ ಅವರು ಟಿವಿಗಳಲ್ಲಿ ಸಹ ನಾಚಿಕೆ ಇಲ್ಲದೇ ಸುಳ್ಳು ಜಾಹೀರಾತುಗಳನ್ನು ಪ್ರಕಟಿಸಿ ಜನರ ದಾರಿ ತಪ್ಪಿಸುತ್ತಿದ್ದು ಚುನಾವಣೆ ಆಯೋಗ ಸುಮ್ಮನೇ ಕುಳಿತಿರುವದು ಸರಿಯಲ್ಲ, ಪ್ರಜಾಪ್ರಭುತ್ವ ವ್ಯವಸ್ಥೆಯೇ ಸಮಸ್ಯೆಯ ಸುಳಿಯಲ್ಲಿದೆ.ಬಿಜೆಪಿಯ ಪ್ರಧಾನಿ, ಶಾ ಸೇರಿ ಎಲ್ಲರೂ ಸುಳ್ಳು ಹೇಳುವದು ಅದನ್ನೇ ಸತ್ಯ ಮಾಡಲು ಹೊರಡುವದು ತೀರಾ ಅಸಯ್ಯತರಿಸಿದೆ,ಪ್ರಜ್ವಲ್ ರೇವಣ್ಣ ಕೇಸ್ ಕಾಂಗ್ರೆಸ್ ರಾಜಕೀಯಕ್ಕೆ ಬಳಸಿದೆ ಎನ್ನುತ್ತಿರುವ ಬಿಜೆಪಿಗರು ನೇಹಾ ಕೇಸಲ್ಲಿ ಹೇಗೆ ನಡೆದುಕೊಂಡರು ಎನ್ನುವದನ್ನು ನೆನಪಿಸಿಕೊಳ್ಳಲಿ ಎಂದಿದ್ದಾರೆ. ಸೋಲುವ ಭಯದಲ್ಲಿ ಶಾಸಕ ಜನಾರ್ಧನ ರಡ್ಡಿ ಕಾಂಗ್ರೆಸ್ ಮಂತ್ರಿ, ಶಾಸಕರ ಬಗ್ಗೆ ಅಪಪ್ರಚಾರ ಮಾಡುತ್ತಿರುವದು ಬಾಲಿಶತನ ಎಂದಿದ್ದಾರೆ. ನುಡಿದಂತೆ ನಡೆಯುವ ಕಾಂಗ್ರೆಸ್ ಹಾಗೂ ಮೋಸ ಮಾಡಿ ಸುಳ್ಳು ಹೇಳುವ ಬಿಜೆಪಿಯಲ್ಲಿ ಯಾರು ಬೇಕು ಎಂಬುದನ್ನು ನರ್ಧರಿಸಿ ಎಂದು ಮನೆ ಮನೆಗೆ ತೆರಳಿ ಜನರಿಗೆ ಮನವರಿಕೆ ಮಾಡುತ್ತಿದ್ದೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ.ಪಂ. ಸದಸ್ಯ ಹೊನ್ನೂರಸಾಬ್ ಭೈರಾಪೂರ, ಕಾಂಗ್ರೆಸ್ ಮುಖಂಡರುಗಳಾದ ಜಾಫರ್ ತಟ್ಟಿ, ಶ್ರೀನಿವಾಸ ಪಂಡಿತ, ಅಂಬಿಕಾ ನಾಗರಾಳ,ಸುಮಂಗಲಾ ನಾಯಕ್, ರೂಪಾ ಬಂಗಾರಿ, ಶ್ರೀದೇವಿ ಶೆಟ್ಟರ್, ಸುಮಿತ್ರಾ ಕಲಾಲ್,ಮಲ್ಲಪ್ಪ ಮುರಡಿ, ಪ್ರಕಾಶ ಗುದಗಿ,ವಿಶ್ವನಾಥ ಅರಕೇರಿ, ವೀರಣ್ಣ ಟಾಂಗ, ಮೌಲಾಹುಸೇನ, ರಬ್ಬಾನ ಹುಳ್ಳಿ, ವಿಜಯಕುಮಾರ ಗುದಗಿ, ಜಾಫರ್, ಮಂಜುನಾಥ ಜಿ. ಗೊಂಡಬಾಳ ಇತರರು ಇದ್ದರು.

ಗುಡಿಸಿಲಿಗೆ ಆಕಸ್ಮಿಕ ಬೆಂಕಿ: ಸ್ಥಳಕ್ಕೆ ಧಾವಿಸಿ ಮಾನವೀಯತೆ ಮೆರೆದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಸಾಂತ್ವನ ಹೇಳಿ ವೈಯಕ್ತಿಕ 50 ಸಾವಿರ ನೆರವು ನೀಡಿದ ಸಚಿವರು

ಬಡಾಲ ಅಂಕಲಗಿ (ಬೆಳಗಾವಿ):ಬೆಳಗಾವಿ ತಾಲೂಕಿನ ಬಡಾಲ ಅಂಕಲಗಿ ಗ್ರಾಮದಲ್ಲಿ ಯಲ್ಲಪ್ಪ ಭೀಮಪ್ಪ ರಾಮಣ್ಣವರ್ ಎಂಬುವರ ಗುಡಿಸಿಲಿಗೆ ಆಕಸ್ಮಿಕವಾಗಿ ಬೆಂಕಿ ಬಿದ್ದು ಸಂಪೂರ್ಣ ಭಸ್ಮವಾಗಿದೆ. ವಿಷಯ ತಿಳಿದ ತಕ್ಷಣವೇ ಸ್ಥಳಕ್ಕೆ ಧಾವಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಅಪಾರ ನಷ್ಟದಿಂದ ತತ್ತರಿಸಿದ ಕುಟುಂಬಕ್ಕೆ ಸಾಂತ್ವನ ಹೇಳಿದರು. ಜೊತೆಗೆ ವೈಯಕ್ತಿಕ 50 ಸಾವಿರ ನೆರವು ನೀಡಿದರು. ಬಡಾಲ ಅಂಕಲಗಿ ಗ್ರಾಮದಲ್ಲಿ ಇಂದು ಮಧ್ಯಾಹ್ನ 2 ಗಂಟೆ ಸುಮಾರಿಗೆ ಯಲ್ಲಪ್ಪ ಭೀಮಪ್ಪ ರಾಮಣ್ಣವರ ಮನೆ ಆಕಸ್ಮಿಕ ಬೆಂಕಿ ಅನಾಹುತದಿಂದ ಸುಟ್ಟು ಕರಕಲಾಗಿದೆ. ಅನಾಹುತದಿಂದಾಗಿ ಶೆಡ್‌ನಲ್ಲಿದ್ದ ಚಿನ್ನ, ಬೆಳ್ಳಿ, 2.50 ಲಕ್ಷ ರೂಪಾಯಿ ಹಣ, ಮನೆಯಲ್ಲಿನ ದಿನ ಬಳಕೆಯ ವಸ್ತುಗಳು ಸುಟ್ಟು ನಾಶವಾಗಿವೆ.

ಯಲ್ಲಪ್ಪ ಭೀಮಪ್ಪ ರಾಮಣ್ಣವರ್ ಹೊಸ ಮನೆ ನರ್ಮಾಣ ಮಾಡುತ್ತಿದ್ದು, ಹೀಗಾಗಿ ಇಡೀ ಕುಟುಂಬ ಗುಡಿಸಿಲಿಗೆ ಸ್ಥಳಾಂತರಗೊಂಡಿತ್ತು. ಹಣ, ಒಡವೆ ಎಲ್ಲವೂ ಮನೆಯಲ್ಲಿದ್ದವು. ಆದರೆ ಆಕಸ್ಮಿಕವಾಗಿ ಬೆಂಕಿ ತಗುಲಿ ಕುಟುಂಬ ಎಲ್ಲವನ್ನೂ ಕಳೆದುಕೊಂಡಿದೆ. ಕುಟುಂಬದ ರೋಧನ ಮುಗಿಲುಮುಟ್ಟಿತ್ತು.

ಚುನಾವಣೆ ಪ್ರಚಾರದಲ್ಲಿದ್ದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದರು. ಕುಟುಂಬಕ್ಕೆ ವೈಯಕ್ತಿಕವಾಗಿ 50 ಸಾವಿರ ರೂಪಾಯಿ ನೆರವು ನೀಡಿದ ಸಚಿವರು, 'ಇಂಥ ಕಷ್ಟದ ಪರಿಸ್ಥಿತಿಯನ್ನು ಧೈರ್ಯದಿಂದ ಎದುರಿಸಿ, ನಮ್ಮ ಜೊತೆಗೆ ನಾನದ್ದೇನೆ' ಎಂದು ಸಚಿವರು ಭರವಸೆ ನೀಡಿದರು. ಈ ವೇಳೆ ಬಡಾಲ ಅಂಕಲಗಿ ಗ್ರಾಮಸ್ಥರು, ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

ಪ್ರತಿಯೊಬ್ಬರು ವಿವೇಚನೆಯಿಂದ ಮತ ಚಲಾಯಿಸಿ: ಜಿಪಂ ಸಿಇಓ

(1 ನೇ ಪುಟದಿಂದ)

ಮೇ 7 ರಂದು ನಡೆಯುವ ಮತದಾನ ದಿನದಂದು ಜಿಲ್ಲೆಯ ಎಲ್ಲಾ ಮತದಾನ ಕೇಂದ್ರಗಳಲ್ಲಿ ನೆರಳು, ಕುಡಿಯವ ನೀರು, ಶೌಚಾಲಯಗಳು ವ್ಯವಸ್ಥೆ ಹಾಗೂ ವಿಶೇಷವಾಗಿ ವೃದ್ದರು, ಅಂಗವಿಕಲರು ಹಾಗೂ ಗರ್ಭಿಣಿಯರಿಗೆ ವಿಶೇಷ ಲೈನ್ ವ್ಯವಸ್ಥೆ ಮಾಡಲಾಗಿದ್ದು, ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.ಮತದಾನ ದಿನದಂದು ಬಿಸಿಲು ಹೆಚ್ಚಿರುವುದರಿಂದ ಆದಷ್ಟು ಬೆಳಗಿನ ಅವಧಿಯಲ್ಲಿಯೇ ಮತದಾನ ಮಾಡಬೇಕು ಎಂದರು.ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಬಸಪ್ಪ, ಪಿಡಿಓ ಪ್ರಭಾಕರ್, ಐಇಸಿ ರಮೇಶ್, ಟಿಸಿ ಮಹಾಂತೇಶ, ಟಿಎಮ್‌ಐಸ್ ಶೇಖರ್ ರೆಡ್ಡಿ, ಬಿಲ್ ಕಲೆಕ್ಟರ್ ಕೊಟ್ರಯ್ಯ, ಡಿಇಓ ರಾಜು ಸೇರಿದಂತೆ ಸುಮಾರು 700 ನರೇಗಾ ಕಾರ್ಮಿಕರು ಭಾಗವಹಿಸಿದ್ದರು.

ಸ್ವೀಪ್ ಕಾರ್ಯಕ್ರಮದಡಿ ಬೈಕ್ ರ್‍ಯಾಲಿ: ಪೂರ್ವಭಾವಿ ಸಭೆ

ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಬೈಕ್ ರ್‍ಯಾಲಿಯಲ್ಲಿ ಭಾಗವಹಿಸಿ: ಸಿಇಓ

(1 ನೇ ಪುಟದಿಂದ)

ಫ್ಲೈಓವರ್ ಮುಖಾಂತರ ಭಾಗ್ಯನಗರದ ಪ್ರಮುಖ ವಾರ್ಡ್‌ಗಳಲ್ಲಿ ಬೈಕ್ ರ್‍ಯಾಲಿ ಸಂಚರಿಸಿ, ಇದೇ ಮಾರ್ಗವಾಗಿ ಭಾಗ್ಯನಗರದ ಮುಖ್ಯ ಬೀದಿಯಿಂದ ಓಜನಹಳ್ಳಿ ಗ್ರಾಮಕ್ಕೆ ಸಂಚರಿಸಿ ನಂತರ ಓಜನಹಳ್ಳಿ ಮುಖ್ಯ ರಸ್ತೆಯಿಂದ ಕೊಪ್ಪಳ ರಸ್ತೆ ಮಾರ್ಗವಾಗಿ ಭಾಗ್ಯನಗರ ಕ್ರಾಸ್ ಮೂಲಕ ಕಿನ್ನಾಳ ರಸ್ತೆ ಮುಖಾಂತರ ಅಶೋಕ್ ಸರ್ಕಲ್ ಮಾರ್ಗವಾಗಿ ಸಂಚರಿಸಿ ತಾಲ್ಲೂಕು ಕ್ರೀಡಾಂಗಣದಲ್ಲಿ ಮುಕ್ತಾಯಗೊಳ್ಳುತ್ತದೆ. ಈ ಬೈಕ್ ರ್‍ಯಾಲಿ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕಿನ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಯ ಸಿಬ್ಬಂದಿಯೊಂದಿಗೆ ನಗದಿತ ಸಮಯಕ್ಕೆ ಕಡ್ಡಾಯವಾಗಿ ಬೈಕ್‌ಗಳೊಂದಿಗೆ ಹೆಲ್ಮೆಟ್ ಧರಿಸಿ ಹಾಜರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.

ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಳ್ಳುವ ಎಲ್ಲರಿಗೂ ಶುದ್ಧ ಕುಡಿಯುವ ನೀರು ಹಾಗೂ ಮಜ್ಜಿಗೆ ವ್ಯವಸ್ಥೆ, ಹಿಂಬದಿ ಸವಾರರಿಗೆ ಕ್ಯಾಪ್ ವ್ಯವಸ್ಥೆ ಮಾಡಬೇಕು. ಮತದಾನದ ಘೋಷ ವಾಕ್ಯಗಳ ಬಟಿಂಗ್ಸ್, ವಾಹನಗಳಲ್ಲಿ ಜಿಂಗಲ್ಸ್‌ಗಳನ್ನು ಪ್ರಸಾರ ಮಾಡಬೇಕು. ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಆರೋಗ್ಯ ಇಲಾಖೆಯಿಂದ ಒಂದು ಅಂಬ್ಯುಲೆನ್ಸ್ ಒದಗಿಸಬೇಕು. ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಅಗತ್ಯ ಚಿಕಿತ್ಸಾ ಸಾಮಗ್ರಿ, ಔಷಧಿಗಳೊಂದಿಗೆ ವೈದ್ಯರ ತಂಡವನ್ನು ಒದಗಿಸಬೇಕು. ಬೈಕ್ ರ್‍ಯಾಲಿಯಲ್ಲಿ ಆಯಾ ಇಲಾಖಾ ಅಧಿಕಾರಿಗಳು ತಮ್ಮ ಸಿಬ್ಬಂದಿಗಳ ಜವಾಬ್ದಾರಿಯನ್ನು ವಹಿಸಿಕೊಂಡು, ಶಿಸ್ತುಬದ್ಧ ಹಾಗೂ ಅರ್ಥಪೂರ್ಣ ರ್‍ಯಾಲಿ ನಡೆಯಲು ಸಹಕರಿಸಬೇಕು ಎಂದು ಅವರು ಅಧಿಕಾರಿಗಳಿಗೆ ಹೇಳಿದರು.'ಸಭೆಯಲ್ಲಿ ಡಿಡಿಪಿಐ ಶ್ರೀಶೈಲ ಬಿರಾದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನರ್ದೇಶಕರಾದ ತಿಪ್ಪಣ್ಣ ಸಿರಸಗಿ, ಜಿ.ಪಂ. ಸಹಾಯಕ ಕಾರ್ಯದರ್ಶಿಗಳಾದ ಶಿವಪ್ಪ ಸುಬೇದಾರ, ತಹಶೀಲ್ದಾರ ವಿಠ್ಠಲ್ ಚೌಗಲಾ, ತಾ.ಪಂ. ಕಾರ್ಯನರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ನಾಗರಾಜ ಜುಮ್ಮನ್ನವರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪಂಜು, ಮೇಣದ ಬತ್ತಿ ಹಿಡಿದು ಮತದಾನ ಜಾಗೃತಿ

ಬಳ್ಳಾರಿ,ಮೇ.03-:ಮೇ 07 ರಂದು ನಡೆಯುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಪ್ರತಿಯೊಬ್ಬ ನಾಗರಿಕರು ಮತ ಚಲಾವಣೆ ಮಾಡಿದರೆ, ಜಿಲ್ಲೆಯ ಶೇಕಡವಾರು ಮತದಾನ ಪ್ರಮಾಣವೂ ಹೆಚ್ಚಳವಾಗುತ್ತದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಪ್ರಮಾಣ ಹೆಚ್ಚಳ ಹಾಗೂ ನೈತಿಕ ಮತದಾನದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಮಿತ್ತ ಶುಕ್ರವಾರದಂದು ನಗರದ ಮಹಾನಗರ ಪಾಲಿಕೆ ಆವರಣದಿಂದ ಏರ್ಪಡಿಸಿದ್ದ ಪಂಜಿನ ಹಾಗೂ ಮೇಣದ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಬಾರಿ ಜಿಲ್ಲೆಯಲ್ಲಿ ಮತದಾನ ಪ್ರಮಾಣ ಹೆಚ್ಚಳವಾಗಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲೆಯಾದ್ಯಂತ ವಿಶೇಷ ಮತದಾನ ಜಾಗೃತಿ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಮತದಾನ ಕುರಿತು ಅರಿವು ಮೂಡಿಸಲಾಗಿದ್ದು, ಖಂಡಿತವಾಗಿಯೂ ಈ ಬಾರಿ ಶೇಕಡವಾರು ಮತದಾನ ಪ್ರಮಾಣ ಶೇ.85 ರಿಂದ 90 ರಷ್ಟು ಪ್ರಮಾಣ ಹೆಚ್ಚಳವಾಗುವ ನಿರೀಕ್ಷೆ ಇದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆಯಲ್ಲಿ ಯಾರೂ ಕೂಡ ಮತದಾನ ಪ್ರಕ್ರಿಯೆಯಿಂದ ಹೊರಗುಳಿಯದೆ ತಪ್ಪದೇ ಪ್ರತಿಯೊಬ್ಬರೂ ಮತ ಚಲಾಯಿಸಬೇಕು ಎಂದರು.

ಇದೇ ವೇಳೆ ಮತದಾರರ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಮೆರವಣಿಗೆ ಸಾಗುವ ಮಾರ್ಗದಲ್ಲಿನ ಸಾರ್ವಜನಿಕರು, ಪಂಜು ಹಾಗೂ ಮೇಣದಬತ್ತಿ ಹಿಡಿದು ಘೋಷಣೆ ಹಾಕುತ್ತಿದ್ದುದನ್ನು ಕುತೂಹಲದಿಂದ ವೀಕ್ಷಿಸಿದರು. ಮತದಾರರಲ್ಲಿ ಮತದಾನದ ಮಹತ್ವ ಸಾರಲು ವಿವಿಧ ಕಾರ್ಯಕ್ರಮಗಳ ಮೂಲಕ ಕಸರತ್ತು ನಡೆಸುತ್ತಿರುವ ಸ್ವೀಪ್ ಸಮಿತಿಯಿಂದ ಶುಕ್ರವಾರ ಏರ್ಪಡಿಸಿದ ಪಂಜಿನ ಮೆರವಣಿಗೆ ನಿಜಕ್ಕೂ ವಿಶಿಷ್ಟವಾಗಿತ್ತು. ಡೊಳ್ಳು ಕುಣಿತದ ಮೂಲಕ ಪಂಜಿನ ಮೆರವಣಿಗೆಯು ಮಹಾನಗರ ಪಾಲಿಕೆ ಕಚೇರಿ ಆವರಣದಿಂದ ಪ್ರಾರಂಭವಾಗಿ ಬೆಂಗಳೂರು ರಸ್ತೆ, ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗದಿಂದ ಹೆಚ್.ಆರ್.ಗವಿಯಪ್ಪ ವೃತ್ತದವರೆಗೆ ಆಗಮಿಸಿ ಅಂತ್ಯಗೊಂಡಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ವಾಗೇಶ್ ಶಿವಾಚಾರ್ಯ, ಮಹಾನಗರ ಪಾಲಿಕೆಯ ಆಯುಕ್ತ ಜಿ.ಖಲೀಲ್ ಸಾಬ್, ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳು, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಪದಾಧಿಕಾರಿಗಳು, ಸಿಬ್ಬಂದಿಯವರು ಸೇರಿದಂತೆ ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಭಾಗವಹಿಸಿದ್ದರು.

ಮೇವಿನ ಬೀಜಗಳ ವಿತರಣೆ

ಯರಗಟ್ಟಿ: ಬರಗಾಲದಲ್ಲಿ ಜಾನುವಾರುಗಳಿಗೆ ಅವಶ್ಯವಿರುವ ಹಸಿರು ಮೇವಿನ ಅವಶ್ಯಕತೆ ಈಡೇರಿಸಲು,ಪಶು ಇಲಾಖೆಯಿಂದ ಹಸಿರು ಮೇವಿನ ಗೋವಿನ ಜೋಳ ಹಾಗೂ ಬಹು ಕಟಾವಿನ ಜೋಳದ ಬೀಜದ ಮಿನಿ ಕಿಟ್ಟುಗಳನ್ನು ಉಚಿತವಾಗಿ ನೀರಾವರಿ ಹೊಂದಿದ ರೈತರಿಗೆ ವಿತರಿಸಲಾಗುತ್ತಿದೆ. ಆಸಕ್ತ ರೈತರು ತಮ್ಮ ಆಧಾರ್ ಕಾರ್ಡ್, ಹೊಲದ ಉತಾರ್ ಹಾಗೂ ಎಫ್ ಐ ಡಿ ಮಾಹಿತಿಯೊಂದಿಗೆ ಪಶು ಆಸ್ಪತ್ರೆ, ಯರಗಟ್ಟಿಗೆ ಭೇಟಿ ನೀಡಲು ಪಡೆದುಕೊಳ್ಳಲು ಮುಖ್ಯ ಪಶುವೈದ್ಯಾಧಿಕಾರಿ